ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

13

ಇಲಾಖೆ / ವಿಷಯ : DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER: 

ದಿನಾಂಕ : DATE 30/12/20

# ಗೋಹತ್ಯೆ ನಿಷೇಧ ಜಾರಿಗೆ ಸಿದ್ಧತೆ: ಚವ್ಹಾಣ್

## ಸಾಗಾಟ, ವಧೆ ಬಗ್ಗೆ ಹದ್ದಿನ ಕಣ್ಣು | ಸುಗ್ರೀವಾಜ್ಞೆಗೆ ರಾಜ್ಯಪಾಲರ ಸಹಿ ಬಳಿಕ ಕಾರ್ಯಾಚರಣೆ ಶುರು

• **ಕನ್ನಡಪ್ರಭ ವಾರ್ತೆ** ಬೆಂಗಳೂರು

30.12.20

ಗೋಹತ್ಯೆ ನಿಷೇಧ ಕಾಯ್ದೆ ಜಾರಿ ಹಿನ್ನೆಲೆಯಲ್ಲಿ ರಾಜ್ಯ ಪ್ರಾಣಿ ಕಲ್ಯಾಣ ಮಂಡಳಿಯ ಸದಸ್ಯರೊಂದಿಗೆ ಸುದೀರ್ಘವಾಗಿ ಚರ್ಚಿಸಲಾಗಿದ್ದು, ರಾಜ್ಯದೆಲ್ಲೆಡೆ ಅಕ್ರಮವಾಗಿ ನಡೆಯುವ ಗೋವುಗಳ ಸಾಗಾಟ, ವಧೆಯ ಬಗ್ಗೆ ನಿಗಾವಹಿಸಿ ಹದ್ದಿನ ಕಣ್ಣಿಡುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಪಶುಸಂಗೋಪನಾ ಸಚಿವ ಪ್ರಭು ಚವ್ಹಾಣ್ ತಿಳಿಸಿದ್ದಾರೆ.



ಗೋಹತ್ಯೆ ನಿಷೇಧ ರಾಜ್ಯದಲ್ಲಿ ಕಠಿಣವಾಗಿ ಜಾರಿಗೆ ತರಲು ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ರಾಜ್ಯಪಾಲರಿಂದ ಅಂಕಿತವಾದ ತಕ್ಷಣ ಇಲಾಖೆ ತೀವ್ರಗತಿಯಲ್ಲಿ ಗೋವು ಸಂರಕ್ಷಣೆಯ ಕಾರ್ಯಾಚರಣೆಯಲ್ಲಿ ತೊಡಗಲಿದೆ ಎಂದಿದ್ದಾರೆ.

'ಸದ್ಯ ರಾಜ್ಯದಲ್ಲಿ ಜನಿಸುತ್ತಿರುವ ವಿದೇಶಿ ತಳಿಯ ಗಂಡು ಕರುಗಳನ್ನು ಕಟುಕರಿಗೆ ನೀಡುತ್ತಿರುವುದು ಗಮನಕ್ಕೆ ಬಂದಿದೆ. ಹೊಸ ಕಾಯ್ದೆಯ ಪ್ರಕಾರ ಇದು ಶಿಕ್ಷಾರ್ಹ. ಪಶುಪಾಲಕರು ಗಂಡು ಕರುಗಳನ್ನು ಕನಿಷ್ಠ 6 ತಿಂಗಳವರೆಗೆ ತಾಯಿಯೊಂದಿಗೆ ಸಾಕಿ ನಂತರ ಕರುವನ್ನು ಗೋಶಾಲೆಗೆ ನೀಡಬೇಕು. ಒಂದು ವೇಳೆ ರೈತರಲ್ಲಿ, ಪಶುಪಾಲಕರಲ್ಲಿ ವಯಸ್ಸಾದ ಗೋವುಗಳಿದ್ದರೆ ಅವುಗಳನ್ನು ವಧೆಗಾಗಿ ಕಟುಕರಿಗೆ ನೀಡದೆ ಹತ್ತಿರದ ಗೋಶಾಲೆಗೆ ನೀಡಬಹುದು' ಎಂದು ಕೋರಿದ್ದಾರೆ.

### ಬಿಡಾಡಿ ದನಗಳ ನಿರ್ವಹಣೆಗೆ ಕ್ರಮ

ರಾಜ್ಯದಲ್ಲಿ ಬಿಡಾಡಿ ದನಗಳ ನಿರ್ವಹಣೆಗೆ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದ್ದು ಅಂತಹ ದನಗಳನ್ನು ತಕ್ಷಣದಲ್ಲಿ ಹತ್ತಿರದ ಗೋಶಾಲೆಗಳಿಗೆ ಸೇರಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಪ್ರತಿ ಜಿಲ್ಲಾ ವ್ಯಾಪ್ತಿಯಲ್ಲಿ ಪಶುಸಂಗೋಪನೆ ಇಲಾಖೆಯ ಉಪ ನಿರ್ದೇಶಕರು ಜಿಲ್ಲಾಧಿಕಾರಿಗಳು ಮತ್ತು ತಹಶೀಲ್ದಾರರೊಂದಿಗೆ ಚರ್ಚಿಸಿ ಸ್ಥಳೀಯವಾಗಿ ಹೊಸದಾಗಿ ಗೋಶಾಲೆಗಳನ್ನು ತೆರೆದು ಮೇವು, ನೀರು, ಚಿಕಿತ್ಸೆ ಹಾಗೂ ಬೀಡಾಡಿ ದನಗಳ ನಿರ್ವಹಣೆಗೆ ವ್ಯವಸ್ಥೆ ಮಾಡಲು ಸೂಚಿಸಲಾಗಿದೆ. ರಸ್ತೆಯಲ್ಲಿ ಬೀಡಾಡಿ ಜಾನುವಾರು ಕಂಡುಬಂದಲ್ಲಿ ಕ್ರಮ ವಹಿಸದ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ವಹಿಸಲಾಗುವುದು ಎಂದು ಸಚಿವ ಪ್ರಭು ಚವ್ಹಾಣ್ ತಿಳಿಸಿದ್ದಾರೆ.

ರಾಜ್ಯದಲ್ಲಿ 159 ಗೋಶಾಲೆಗಳಿದ್ದು ಅವುಗಳಲ್ಲಿ 75ಕ್ಕೂ ಹೆಚ್ಚು ಗೋಶಾಲೆಗಳಿಗೆ ಅನುದಾನವನ್ನು ರಾಜ್ಯ ಸರ್ಕಾರ ನೀಡುತ್ತಿದೆ. ಈಗಿರುವ ಎಲ್ಲ ಗೋಶಾಲೆಗಳಲ್ಲಿ ಗೋವುಗಳ ಸಾಕಣೆಯ ಸಾಮರ್ಥ್ಯ ಹೆಚ್ಚಿಸಲು ಎಲ್ಲ ಗೋಶಾಲೆಗಳಿಗೆ ತಿಳಿಸಲಾಗಿದೆ. ಗೋವು ಸಾಕಣೆಯಲ್ಲಿ ತೊಂದರೆ ಅನುಭವಿಸುತ್ತಿದ್ದವರು ಗೋಶಾಲೆಗಳಿಗೆ ತಮ್ಮ ಜಾನುವಾರು ಬಿಡಲು ಮುಂದಾದರೆ ಗೋಶಾಲೆಗಳು ಗೋವುಗಳನ್ನು ಪಡೆಯಲು ನಿರಾಕರಿಸುವಂತಿಲ್ಲ ಎಂದು ಸೂಚಿಸಿದ್ದಾರೆ.